RNU AIR DHARWAD

# JANUARY 18, 2025
# AKASHAVANI - DHARWAD
# REGIONAL NEWS BULLETIN (KANNADA) 07.05 A.M.

**ಮುಖ್ಯಾಂಶಗಳು**

- **ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ ಕರೆ.**
- **ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಹಾಜರಾತಿ ಸೇರಿ, ಇನ್ನಿತರೆ ರಿಯಾಯ್ತಿಗಳನ್ನು ನೀಡುವ ಕುರಿತು ಚರ್ಚೆ– ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಬೆಂಬಲ ಬೆಲೆಯಡಿ ಸಿರಿಧಾನ್ಯ ಖರೀದಿಸಲು ಕೇಂದ್ರಕ್ಕೆ ರಾಜ್ಯ ಸರ್ಕಾರ ಶಿಫಾರಸ್ಸು – ಸಚಿವ ಎನ್.ಚಲುವರಾಯಸ್ವಾಮಿ.**
- **‘ಒಂದೇ ಆಕಾಶ, ಒಂದೇ ಭೂಮಿ, ಒಂದೇ ಕುಟುಂಬ’ ಧ್ಯೇಯ ವಾಕ್ಯದಡಿ, ಮಂಗಳೂರಿನಲ್ಲಿ ಇಂದು ಅಂತಾರಾಷ್ಟ್ರೀಯ ಮಟ್ಟದ ಗಾಳಿಪಟ ಉತ್ಸವ ಆರಂಭ.**

**ಈಗ ವಾರ್ತೆಗಳ ವಿವರ**

**ಇಂದಿನ ಮಕ್ಕಳು ಆಧುನಿಕ** ಮತ್ತು ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಪಕರು. ಆದ್ದರಿಂದ ಅವರ ಶಿಕ್ಷಣ ಮತ್ತು ಕಲ್ಯಾಣ ಹಾಗೂ ಅವರಲ್ಲಿನ ನೈತಿಕ ಗುಣಗಳ ಅಭಿವೃದ್ಧಿಗೆ ವಿಶೇಷ ಗಮನ ನೀಡಬೇಕು. ವಿದ್ಯಾರ್ಥಿಗಳು ಓದಿನೊಂದಿಗೆ, ಕ್ರೀಡೆ ಮತ್ತಿತರ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು. ಸ್ವಾಮಿ ವಿವೇಕಾನಂದರ ಮಾರ್ಗದರ್ಶನದಲ್ಲಿ ಯುವಪೀಳಿಗೆ ನಡೆದು, ದೇಶದ ಅಭಿವೃದ್ಧಿಯಲ್ಲಿ ಪಾಲ್ಗೊಳ್ಳಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ ಕರೆ ನೀಡಿದ್ದಾರೆ. ಬಳ್ಳಾರಿ ಜಿಲ್ಲೆಯ ಎಸ್‌ಬಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್‌ನಲ್ಲಿ, ಬೃಂದಾ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಪಿಯು ಕಾಲೇಜು, ಪದವಿ ಕಾಲೇಜು ಮತ್ತು ಸ್ಕಂದ ಇನ್‌ಸ್ಟಿಟ್ಯೂಷನ್ ಆಫ್ ನರ್ಸಿಂಗ್ ಅನ್ನು ಉದ್ಘಾಟಿಸಿ, ಅಂಕುರಂ–2025 ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ವಿದ್ಯಾರ್ಥಿಗಳು ಪ್ರತಿದಿನ ಹೊಸ ಕಲಿಕೆಯೊಂದಿಗೆ ಪ್ರಾರಂಭಿಸಬೇಕು. ವೈಫಲ್ಯಗಳು ನಮ್ಮನ್ನು ಬಲಪಡಿಸುತ್ತವೆ. ಜೀವನದ ಯಶಸ್ಸಿನಲ್ಲಿ ಶಿಕ್ಷಣವು ಮಹತ್ವದ ಪಾತ್ರವನ್ನು ವಹಿಸುತ್ತದೆ, ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಉಪಯುಕ್ತವಾಗಿದೆ ಹಾಗೂ ನಮಗೆ ಆಲೋಚನೆಗಳನ್ನು ವ್ಯಕ್ತಪಡಿಸುವ ಸಾಮರ್ಥ್ಯವನ್ನು ಒದಗಿಸುತ್ತದೆ. ಶಿಕ್ಷಣವು ಎಂದಿಗೂ ವ್ಯರ್ಥವಾಗುವುದಿಲ್ಲ ಎಂದರು.

<><><>

**ಕ್ರೀಡಾಪಟುಗಳು, ತರಬೇತುದಾರರು** ಮತ್ತು ಕ್ರೀಡಾ ಇಲಾಖೆಗೆ ಅಗತ್ಯ ಹಣಕಾಸು ನೆರವು ಹಾಗೂ ಸೌಲಭ್ಯ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮಂಗಳೂರಿನಲ್ಲಿ ಆಯೋಜಿಸಿದ್ದ 'ಕರ್ನಾಟಕ ಕ್ರೀಡಾಕೂಟ 2025 ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದ ಕ್ರೀಡಾಪಟುಗಳು ದೇಶಕ್ಕಾಗಿ ಪದಕಗಳನ್ನು ತರುವ ಮೂಲಕ ಕ್ರೀಡಾ ಕ್ಷೇತ್ರವನ್ನು ಇನ್ನೂ ಉತ್ತಮವಾಗಿ ಬೆಳೆಸಬೇಕು. ತಮ್ಮ ಸರ್ಕಾರ, ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಹಾಜರಾತಿ ಸೇರಿ, ಇನ್ನಿತರೆ ರಿಯಾಯ್ತಿಗಳನ್ನು ಕೊಡುವ ಬಗ್ಗೆ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ತಿಳಿಸಿದರು. ಮುಂದಿನ ಬಜೆಟ್‌ನಲ್ಲಿ ಮಂಗಳೂರು ಮತ್ತು ಉಡುಪಿ ಕ್ರೀಡಾಂಗಣಗಳ ಉನ್ನತೀಕರಣಕ್ಕೆ ತಲಾ 3 ಕೋಟಿ ರೂಪಾಯಿ ನಿಗದಿಪಡಿಸಲಾಗುವುದು. ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲೂ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಾಗ ಶೇಕಡ 2 ರ ಷ್ಟ ಉದ್ಯೋಗಗಳು ಕ್ರೀಡಾಪಟುಗಳಿಗೆ ಮೀಸಲಿಡಲಾಗುವುದು. ಜೊತೆಗೆ ಪೊಲೀಸ್, ಅರಣ್ಯ ಇಲಾಖೆ ಸೇರಿ ಸಮವಸ್ತ್ರ ಧರಿಸುವ ಹುದ್ದೆಗಳಿಗೆ ಶೇಕಡ 3 ರ ಷ್ಟ ಉದ್ಯೋಗ ಮೀಸಲಿಡಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದರು.

<><><>

**ಅತಿ ಹೆಚ್ಚು ಮೆಣಸಿನಕಾಯಿ ಬೆಳೆ**ಯುತ್ತಿರುವ ಬಳ್ಳಾರಿ ಜಿಲ್ಲೆಯಲ್ಲಿ ಮೆಣಸಿನಕಾಯಿ ಮಾರುಕಟ್ಟೆ ನಿರ್ಮಿಸಬೇಕು ಎಂಬ ಬೇಡಿಕೆ ಇದೆ. ಹೀಗಾಗಿ ಶೀಥಲೀಕರಣ ಘಟಕದ ಜತೆಗೆ ಮೆಣಸಿನಕಾಯಿ ಮಾರುಕಟ್ಟೆಯನ್ನೂ ನಿರ್ಮಿಸಲಾಗುವುದು ಎಂದು ಕೃಷಿ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಪಾಟೀಲ ಭರವಸೆ ನೀಡಿದ್ದಾರೆ. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯಲ್ಲಿ ಆಯೋಜಿಸಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣಕ್ಕೆ ಎಪಿಎಂಸಿಯಿಂದ 5 ಕೋಟಿ ರೂಪಾಯಿ ಅನುದಾನ ನೀಡಲಿದ್ದು, ಇತರ ಮೂಲಗಳಿಂದ ಅಗತ್ಯ ಸಂಪನ್ಮೂಲ ಕ್ರೋಢೀಕರಣ ಮಾಡಲಾಗುವುದು. ಎಪಿಎಂಸಿ ಬಳಿ ಬಳ್ಳಾರಿ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಆಡಳಿತ ಭವನ ನಿರ್ಮಿಸಲು ಅಗತ್ಯ ನಿವೇಶನ ಒದಗಿಸಲಾಗುವುದು ಎಂದರು.

<><><>

**ಬೆಂಬಲ ಬೆಲೆಯಡಿ** ಸಿರಿಧಾನ್ಯಗಳನ್ನು ಖರೀದಿಸಲು ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರದಿಂದ ಪತ್ರ ಬರೆದು ಶಿಫಾರಸ್ಸು ಮಾಡಲಾಗಿದೆ ಎಂದು ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಶ್ರೀರಾಂಪುರ ಹೋಬಳಿಯ ಮಲ್ಲಿಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ, ನಂತರ ಸುದ್ದಿಗಾರರಿಗೆ ಅವರು ಈ ವಿಷಯ ತಿಳಿಸಿದರು. ಇದೇ ತಿಂಗಳ 23 ರಿಂದ 3 ದಿನಗಳ ಕಾಲ ಅಂತಾರಾಷ್ಟ್ರೀಯ ಸಾವಯವ ಸಿರಿಧಾನ್ಯ ಮೇಳ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಯವರು ಮೇಳ ಉದ್ಘಾಟಿಸುವರು. ದೇಶದ 25 ರಾಜ್ಯಗಳ ಕೃಷಿ ಮಂತ್ರಿಗಳು, ವಿವಿಧ ದೇಶಗಳ ಅಧಿಕಾರಿ ಹಾಗೂ ರೈತರು ಸಹ ಮೇಳದಲ್ಲಿ ಪಾಲ್ಗೊಳ್ಳುವರು. ಈ ಮೂಲಕ ಅಂತಾರಾಷ್ಟ್ರೀಯ ಮಟ್ಟದಲ್ಲೂ ಸಿರಿಧಾನ್ಯಗಳಿಗೆ ಮಾರುಕಟ್ಟೆ ದೊರಕಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು,** ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ, 'ಮನ್ ಕಿ ಬಾತ್' ಮೂಲಕ, ನಾಳೆ 3ನೇ ಭಾನುವಾರ, ಬೆಳಗ್ಗೆ 11 ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ**

**ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.**

<><><>

**ಕರಾವಳಿ ಉತ್ಸವದ ಅಂಗವಾಗಿ** ಮಂಗಳೂರಿನ ತಣ್ಣೀರು ಬಾವಿ ಕಡಲ ಕಿನಾರೆಯಲ್ಲಿ 'ಒಂದೇ ಆಕಾಶ, ಒಂದೇ ಭೂಮಿ, ಒಂದೇ ಕುಟುಂಬ' ಎಂಬ ಧ್ಯೇಯ ವಾಕ್ಯದಡಿ, ಅಂತಾರಾಷ್ಟ್ರೀಯ ಮಟ್ಟದ ಗಾಳಿಪಟ ಉತ್ಸವ ಆಯೋಜಿಸಲಾಗಿದೆ. ಜಿಲ್ಲಾಡಳಿತದ ಸಹಕಾರದೊಂದಿಗೆ ಟೀಮ್ ಮಂಗಳೂರು ಹವ್ಯಾಸಿ ಗಾಳಿಪಟ ತಂಡದ ನೇತೃತ್ವದಲ್ಲಿ ಉತ್ಸವ ನಡೆಯಲಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ. ಇಂದು ಸಂಜೆ 5 ಗಂಟೆಗೆ ಈ ಗಾಳಿಪಟ ಉತ್ಸವವನ್ನು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಲಿದ್ದಾರೆ. ಇಂದು ಹಾಗೂ ನಾಳೆ ಸಂಜೆ 3 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ಗಾಳಿಪಟ ಉತ್ಸವ ನಡೆಯಲಿದೆ. ಇಂಗ್ಲೆಂಡ್, ಜರ್ಮನಿ, ನೆದರ್ ಲ್ಯಾಂಡ್, ಇಟಲಿ, ಸ್ವೀಡನ್, ಇಂಡೋನೇಷಿಯಾ, ಪೋರ್ಚುಗಲ್ ಮುಂತಾದ ವಿದೇಶಿ ಗಾಳಿಪಟ ತಂಡಗಳು ಮತ್ತು ಒಡಿಶಾ, ರಾಜಸ್ತಾನ, ಮಹಾರಾಷ್ಟ್ರ, ತೆಲಂಗಾಣ, ಕೇರಳ, ಗುಜರಾತ್ ಮುಂತಾದ ರಾಜ್ಯಗಳಿಂದ ಗಾಳಿಪಟ ತಂಡಗಳು ಆಗಮಿಸುತ್ತಿವೆ ಎಂದು ಅವರು ಮಾಹಿತಿ ನೀಡಿದರು.

<><><>

**ಕೇಂದ್ರ ಸರ್ಕಾರದ 'ಅಪಾರ್'** ಯೂನಿಕ್ ಗುರುತಿನ ಚೀಟಿ ಯೋಜನೆಯನ್ನು ವಿದ್ಯಾರ್ಥಿಗಳ ಉಪಯೋಗಕ್ಕಾಗಿ ಆರಂಭಿಸಲಾಗಿದೆ. ಇದು ವಿದ್ಯಾರ್ಥಿಗಳ ಎಲ್ಲ ವಿವರಗಳನ್ನು ಒದಗಿಸುತ್ತಿದೆ. ವಿಜಯನಗರ ಜಿಲ್ಲೆಯ ಎಲ್ಲ ತಾಲೂಕುಗಳಲ್ಲೂ ಈ ಸೇವೆ ಜಾರಿಯಲ್ಲಿದ್ದು, ಜಿಲ್ಲೆಯ 1 ಲಕ್ಷ 13 ಸಾವಿರದ 647 ಮಕ್ಕಳಿಗೆ ಅಪಾರ್ ಗುರುತಿನ ಚೀಟಿ ನೀಡಲಾಗಿದೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ವೆಂಕಟೇಶ ರಾಮಚಂದ್ರಪ್ಪ.

**ಧ್ವನಿ– ವೆಂಕಟೇಶ ರಾಮಚಂದ್ರಪ್ಪ (43 ಸೆಕೆಂದುಗಳು)**

<><><>

**ಮೈಸೂರು ಆಕಾಶವಾಣಿಯು ಕೇಳುಗರ** ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ಸಮಾಜದ ಸ್ವಾಸ್ಥ್ಯ ಕಾಪಾಡುವ ಸಕಾರಾತ್ಮಕ ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಿದೆ ಎಂದು ಜಾನಪದ ವಿದ್ವಾಂಸ, ಡಾಕ್ಟರ್ ಕೃಷ್ಣಮೂರ್ತಿ ಹನೂರು ಹೇಳಿದ್ದಾರೆ. ಮೈಸೂರು ಆಕಾಶವಾಣಿಗೆ 90 ವರ್ಷಗಳು ಪೂರೈಸಿದ ಹಿನ್ನಲೆಯಲ್ಲಿ ಚಾಮರಾಜನಗರ ಪಟ್ಟಣದಲ್ಲಿ ಆಯೋಜಿಸಲಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮೈಸೂರು ಆಕಾಶವಾಣಿಯ ಸಹಾಯಕ ನಿರ್ದೇಶಕರಾದ ಅಬ್ದುಲ್

ರಶೀದ್ ಮಾತನಾಡಿ, ಮೈಸೂರು ಆಕಾಶವಾಣಿಯು ಉತ್ತಮ ಕಾರ್ಯಕ್ರಮಗಳನ್ನು ಬಿತ್ತರಿಸುವುದರ ಮೂಲಕ ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಸರ್ವಜನರ ಹಿತಕಾಯುವಲ್ಲಿ ಶ್ರಮಿಸುತ್ತಿದೆ ಎಂದರು.

<><><>

**ಈಗ ಸಂಕ್ಷಿಪ್ತ ಸುದ್ದಿಗಳು**

**ಶಾಲೆಗಳಲ್ಲಿ ಮಕ್ಕಳಿಗೆ ಶಿಕ್ಷಣದ** ಜೊತೆಗೆ ರಕ್ಷಣೆಯ ಭರವಸೆ ಸಿಗಬೇಕು. ತಮ್ಮ ಕರ್ತವ್ಯದ ಜೊತೆಗೆ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಹಾವೇರಿಯಲ್ಲಿ ಹೇಳಿದ್ದಾರೆ.

<><><>

**ಗದಗ ಜಿಲ್ಲೆಯಲ್ಲಿ** 20 ಪರೀಕ್ಷಾ ಕೇಂದ್ರಗಳಲ್ಲಿ ಇಂದು ಜವಾಹರ ನವೋದಯ ವಿದ್ಯಾಲಯದ ಪ್ರವೇಶ ಕುರಿತು ಪರೀಕ್ಷೆಗಳು ಜರುಗಲಿವೆ. ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ ಗದಗ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ ಆದೇಶ ಹೊರಡಿಸಿದ್ದಾರೆ.

<><><>

**ಪರಿಶಿಷ್ಟ ಪಂಗಡದವರ** ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಎನ್.ಜಿ.ಓ ಸಂಸ್ಥೆಗಳು 2024–25 ನೇ ಸಾಲಿನಲ್ಲಿ ಹೊಸ ಯೋಜನೆಗಾಗಿ ಕೇಂದ್ರ ಸರ್ಕಾರದಿಂದ ಸಹಾಯಧನ ಪಡೆಯಲು ಆನ್ ಲೈನ್ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಎನ್.ಜಿ.ಓ. ಪೋರ್ಟಲ್ ತೆರೆದಿದ್ದು, ಫೆಬ್ರುವರಿ 15 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ–08382–226575 ನ್ನು ಸಂಪರ್ಕಿಸುವಂತೆ ಉತ್ತರಕನ್ನಡ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ದಲಿತರಿಗೆ ಬಗರ್ ಹುಕುಂ** ಸಾಗುವಳಿ ಚೀಟಿಗಳನ್ನು ನೀಡಬೇಕು. ಗಂಗಾಕಲ್ಯಾಣ ಕೊಳವೆ ಬಾವಿಗಳನ್ನು ಆದ್ಯತೆ ಮೇಲೆ ಕೊರೆಯಬೇಕು. ವಸತಿ ರಹಿತ ದಲಿತರಿಗೆ ಉಚಿತ ನಿವೇಶನ ನೀಡುವ ಜೊತೆಗೆ, ಮನೆ ನಿರ್ಮಿಸಿ ಕೊಡುವುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, ಇದೇ ತಿಂಗಳ 20 ರಿಂದ ಚಿಕ್ಕಬಳ್ಳಾಪುರ ಜಿಲ್ಲೆಯ 7 ತಾಲ್ಲೂಕು ಕೇಂದ್ರಗಳಲ್ಲಿ ಅನಿರ್ದಿಷ್ಟಾವಧಿ ಧರಣಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ದಲಿತ ಸಂಘರ್ಷ ಸಮಿತಿ ತಿಳಿಸಿದೆ.

<><><>

**ದಾವಣಗೆರೆ ಜಿಲ್ಲೆಯಲ್ಲಿ ರಾಜ್ಯ** ಸರ್ಕಾರದ ಗ್ಯಾರಂಟಿ ಯೋಜನೆಗಳು ಶೇಕಡ 98 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಟಿ.ಬಸವರಾಜ್ ಹೇಳಿದ್ದಾರೆ.

<><><>